ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/JD NORTH/ LP/ 0161/2014-15 ದಿನಾಂಕ: 23-03-2016

## ಪ್ರಾರಂಭಿಕ ಪ್ರಮಾಣಪತ್ರ

**ವಿಷಯ:** ಆಸ್ತಿ ಸಂಖ್ಯೆ: 56/89/4/1, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 06, ಯಲಹಂಕ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – ಎ, ಬಿ, ಸಿ ಮತ್ತು ಜಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/ LP/0161/2014-15 ದಿನಾಂಕ: 18-10-2014

2) ತಮ್ಮ ಮನವಿ ಪತ್ರ ದಿನಾಂಕ: 12-01-2016

* * * * * * *

ಆಸ್ತಿ ಸಂಖ್ಯೆ: 56/89/4/1, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 06, ಯಲಹಂಕ ವಲಯ, ಬೆಂಗಳೂರು ಇಲ್ಲಿ ಬ್ಲಾಕ್ – ಎ ರಲ್ಲಿ ತಳ + ನೆಲ + ಮೇಲಿನ 13 ಅಂತಸ್ತುಗಳು ಮತ್ತು ಬ್ಲಾಕ್ – ಬಿ, ಸಿ, ಡಿ, ಇ, ಎಫ್ ಮತ್ತು ಜಿ ರಲ್ಲಿ ತಳ + ನೆಲ + ಮೇಲಿನ 14 ಅಂತಸ್ತುಗಳಲ್ಲಿ 46 EWS ಘಟಕಗಳನ್ನೊಳಗೊಂಡಂತೆ ಒಟ್ಟಾರೆ 456 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 18-10-2014 ರಂದು ನಕ್ಷೆ ಮಂಜೂರಾತಿಯನ್ನು ಹಾಗೂ ಬ್ಲಾಕ್ – ಡಿ, ಇ ಮತ್ತು ಎಫ್ ರಲ್ಲಿನ ತಳ + ನೆಲ + ಮೇಲಿನ 14 ಅಂತಸ್ತುಗಳ ವಸತಿ ಸಮುಚ್ಚಯ ಕಟ್ಟಡಕ್ಕೆ ದಿನಾಂಕ: 02-12-2015 ರಂದು ಪ್ರಾರಂಭಿಕ ಪ್ರಮಾಣಪತ್ರವನ್ನು (ಭಾಗಶಃ) ನೀಡಲಾಗಿರುತ್ತದೆ. ಪ್ರಸ್ತುತ ಸದರಿ ಬ್ಲಾಕ್ – ಎ, ಬಿ, ಸಿ ಮತ್ತು ಜಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 14-03-2016 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 1,15,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000352 ದಿನಾಂಕ: 19-03-2016 ರಂದು ಸಂದಾಯ ಮಾಡಿರುವುದರಿಂದ, ಸದರಿ ಬ್ಲಾಕ್ – ಎ, ಬಿ, ಸಿ ಮತ್ತು ಜಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ಕೈಗೊಳ್ಳತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

23/03/16

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/03/16 23/3/16 23/3/16

ಗೆ,

ಮೆ; ಅರವಿಂದ್ ಹೆಬ್ಬಾಳ್ ಹೋಮ್ಸ್ ಪ್ರೈ ಲಿ.,
# 1, ಪ್ಯಾಲೇಸ್ ವೀವ್, 2ನೇ ಮಹಡಿ,
ಬಿ.ಎಸ್.ರಾಜು ರಸ್ತೆ, ಕುಮಾರಪಾರ್ಕ್ ಪಶ್ಚಿಮ,
ಬೆಂಗಳೂರು – 560 020.

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – **560 002.**

ಸಂಖ್ಯೆ: BBMP/Addl.Dir/JD NORTH/0161/2014-15 ದಿನಾಂಕ: 02-12-2015.

ಜಂಟಿ ನಿರ್ದೇಶಕರು ... ಸಂ JD(TP)/N/OC/72/15-16. ದಿನಾಂಕ 2/12/015 ನಗರ ಯೋಜನೆ ಮಹಾನಗರ ಪಾಲಿಕೆ ಬೆಂಗಳೂರು

### ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಸಂಖ್ಯೆ: 56/89/4/1, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ.06, ಯಲಹಂಕ ವಲಯ, ಬೆಂಗಳೂರು, ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – ಡಿ, ಇ ಮತ್ತು ಎಫ್ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/ JD North/ LP/0161/2014-15 ದಿನಾಂಕ: 18–10–2014.

2) ತಮ್ಮ ಮನವಿ ಪತ್ರ ದಿನಾಂಕ: 13–10–2015.

* * * * * * *

ಆಸ್ತಿ ಸಂಖ್ಯೆ: 56/89/4/1, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ.06, ಯಲಹಂಕ ವಲಯ, ಬೆಂಗಳೂರು, ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – ಡಿ, ಇ ಮತ್ತು ಎಫ್ ರಲ್ಲಿನ ತಳ+ನೆಲ+ಮೇಲಿನ 14 ಅಂತಸ್ತುಗಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 18–10–2014 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಉಲ್ಲೇಖ (2) ರಲ್ಲಿ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಕೋರಿರುವುದಕ್ಕೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 25–11–2015 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 62,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000107 ದಿನಾಂಕ: 01–12–2015 ಸಂದಾಯ ಮಾಡಿರುವುದರಿಂದ, ಸದರಿ ಬ್ಲಾಕ್ – ಡಿ, ಇ ಮತ್ತು ಎಫ್ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
4. ಮಂಜೂರಾದ ನಕ್ಷೆಯ ಅನುಸಾರ ಇನ್ನುಳಿದ ಬ್ಲಾಕ್‌ಗಳ ವಸತಿ ಸಮುಚ್ಚಯ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಿ, ಆರ್.ಸಿ.ಸಿ. ಸ್ತಂಭಗಳನ್ನು ಅಳವಡಿಸಿದ ನಂತರ ಆ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರಕ್ಕಾಗಿ ಪ್ರತ್ಯೇಕವಾಗಿ ಮನವಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

5. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಗೆ,
ಮೆ॥ ಅರವಿಂದ್ ಹೆಬ್ಬಾಳ್ ಹೋಮ್ಸ್ ಪ್ರೈ.ಲಿ.,
# 56/89/4/1, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ,
ಬೆಂಗಳೂರು ಪೂರ್ವ ತಾಲ್ಲೂಕು,
ವಾರ್ಡ್ ನಂ.06, ಯಲಹಂಕ ವಲಯ,
ಬೆಂಗಳೂರು